



ಅರುಣ ಪಿ. ಭಟ್ಟ

## ವಾರಭವಿಷ್ಯ: 24.09.2020ರಿಂದ 30.09.2020ರವರೆಗೆ




ಭೂ ವ್ಯವಹಾರಗಳಲ್ಲಿ ಒಳ್ಳೆ ಲಾಭ ಗಳಿಸುವ ಅವಕಾಶ ಇದೆ. ದೂರದ ಪ್ರದೇಶಗಳಿಗೆ ಪ್ರಯಾಣ ಮಾಡುವ ಸಾಧ್ಯತೆ ಇದೆ. ಯಾವುದೇ ಮುಖ್ಯ ಕಾಗದ ಪತ್ರಗಳಿಗೆ ಸಹಿ ಹಾಕುವ ಮುನ್ನ ಒಂದಕ್ಕೆ ನಾಲ್ಕು ಬಾರಿ ಪರಿಶೀಲನೆ ನಡೆಸಿ. ಮನೆಗೆ ಅಗತ್ಯ ಇರುವ ವಸ್ತುಗಳನ್ನು ಖರೀದಿ ಮಾಡಲು ಹೆಚ್ಚಿನ ಖರ್ಚು ಮಾಡಲಿದ್ದೀರಿ. ಉದ್ಯೋಗದಲ್ಲಿ ಬಡ್ತಿ ದೊರೆಯುವ ಸಾಧ್ಯತೆ ಹೆಚ್ಚಿದೆ. ಶುಭದಿನ 28. ಹನುಮಾನ್ ಚಾಲೀಸ್ ಓದಿರಿ.




ನೀವು ನಂಬಿದ ವಿಚಾರಗಳನ್ನು ಪ್ರಸ್ತುತ ಪಡಿಸುವುದಕ್ಕೆ ಬಹಳ ಶ್ರಮ ಪಡುತ್ತೀರಿ. ಸ್ನೇಹಿತರಿಗೆ ಸಾಲ ನೀಡಿದರೆ ವಾಪಸ್ ಬರುವುದು ಕಷ್ಟ. ಕಾನೂನು ವಿಚಾರಗಳು ನಿಮ್ಮ ವಿರುದ್ಧ ಸಾಗುತ್ತವೆ. ಬೇರೊಬ್ಬರು ನೀಡಿದ ವಸ್ತು, ಹಣ, ಕಾಗದ ದಾಖಲೆ ಪತ್ರಗಳನ್ನು ನೀವು ಕಳೆದುಕೊಳ್ಳುವ ಅವಕಾಶ ಇದ್ದು, ಅಂಥ ಜವಾಬ್ದಾರಿ ವಹಿಸಿಕೊಳ್ಳಬೇಡಿ. ಶುಭದಿನ 27. ಗಣೇಶಪಂಚರತ್ನ ಸ್ತೋತ್ರ ಪಠಣ ಮಾಡಿರಿ.




ಒಂದೇ ಸಲಕ್ಕೆ ಹಲವು ಅವಕಾಶಗಳು ನಿಮ್ಮನ್ನು ಹುಡುಕಿಕೊಂಡು ಬರುತ್ತವೆ. ಯಾವುದನ್ನು ಆಯ್ಕೆ ಮಾಡಿಕೊಳ್ಳಬೇಕು ಎಂಬ ಬಗ್ಗೆ ಸ್ಪಷ್ಟತೆ ಇರಲಿ. ಸರ್ಕಾರಿ ನೌಕರರಿಗೆ ವರ್ಗಾವಣೆ ಆಗಬಹುದು. ವೈಯಕ್ತಿಕ ಸಂಬಂಧದಲ್ಲಿ ಬಹಳ ಹುಷಾರಾಗಿರಬೇಕು. ಕೋರ್ಟ್ ಪ್ರಕರಣ ಕಡೆ ಹೆಚ್ಚಿನ ಗಮನ ನೀಡಬೇಕು. ಉತ್ತಮ ಅವಕಾಶಗಳು ಹುಡುಕಿಕೊಂಡು ಬರುತ್ತವೆ. ಶುಭದಿನ 1. ಕಾಲಭೈರವಾಷ್ಟಕ ಸ್ತೋತ್ರ ಪಠಿಸಿರಿ.




ನಿಮ್ಮ ಆದಾಯದಲ್ಲಿ ಈ ವಾರ ಹೆಚ್ಚಳ ಕಾಣಿಸಿಕೊಳ್ಳಲಿದೆ. ಈ ಹಿಂದೆ ನೀವು ಹಾಕಿದ ಶ್ರಮಕ್ಕೆ ಒಂದೊಂದಾಗಿ ಪ್ರತಿಫಲ ದೊರೆಯುತ್ತದೆ. ಸಾಮಾಜಿಕ ವರ್ಚಸ್ಸು ಹೆಚ್ಚಾಗುತ್ತದೆ. ವಿದ್ಯಾರ್ಥಿಗಳಿಗೆ ಈ ವಾರ ಯಶಸ್ಸು ದೊರೆಯುವ ಅವಕಾಶಗಳು ಹೆಚ್ಚಿದೆ. ಹಣಕಾಸಿನ ವ್ಯವಹಾರದಲ್ಲಿ ಅನಿರೀಕ್ಷಿತವಾದ ಬಿಕ್ಕಟ್ಟು ಎದುರಾಗಿ, ಗೊಂದಲಕ್ಕೆ ಒಳಗಾಗುತ್ತೀರಿ. ಶುಭದಿನ 29. ವಿಷ್ಣುಸಹಸ್ರನಾಮ ಓದಿರಿ.




ನಿಮ್ಮ ವೈಯಕ್ತಿಕ ಗೌರವದ ನೆರವಿನಿಂದ ಇತರರಿಗೆ ಸಹಾಯ ಮಾಡಲು ಮುಂದಾಗುತ್ತೀರಿ. ಬಹಳ ಕಾಲದಿಂದ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಿದ್ಧತೆ ನಡೆಸುತ್ತಿದ್ದರೆ ಫಲವನ್ನು ಪಡೆಯಲು ಇದು ಸರಿಯಾದ ಕಾಲ. ಹೊಸ ವಸ್ತುವೊಂದನ್ನು ಖರೀದಿ ಮಾಡುವ ಪಕ್ಷದಲ್ಲಿ ಖರೀದಿಸುವ ನಿಮ್ಮ ನಿರ್ಧಾರವನ್ನು ಮುಂದಕ್ಕೆ ಹಾಕುವುದೇ ಉತ್ತಮ. ಶುಭದಿನ 30. ಶ್ರೀಗೋವಿಂದಾಷ್ಟಕಂ ಪಠಿಸಿರಿ.




ತಾಯಿಯ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸಿ. ನಿಮಗೂ ಅನಾರೋಗ್ಯ ಸಮಸ್ಯೆಗಳು ಕಾಡಬಹುದು. ವಾರದ ಮೊದಲಾರ್ಧದ ನಂತರ ಆರ್ಥಿಕವಾಗಿ ಬಲ ಬರುತ್ತದೆ. ಉಳಿತಾಯ ಮಾಡುವ ಕಡೆಗೆ ಮನಸ್ಸು ಹರಿಯುತ್ತದೆ. ಮಕ್ಕಳ ಪ್ರಗತಿಯಿಂದ ಹೆಮ್ಮೆ, ಸಂತೋಷ ಉಂಟಾಗುತ್ತದೆ. ಬಾಕಿ ಹಣ ಬರಬೇಕಾಗಿದ್ದಲ್ಲಿ ಬರುವ ಅವಕಾಶ ಹೆಚ್ಚಿರುತ್ತದೆ. ಶುಭದಿನ 28. ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿರಿ.




ದೂರ ಪ್ರಯಾಣ ಮಾಡಬೇಕಾದ ಸನ್ನಿವೇಶ ಎದುರಾಗಲಿದೆ. ಹಣ ಹೂಡಿಕೆಯಲ್ಲಿ ಉತ್ತಮ ಲಾಭ ಆಗಲಿದೆ. ಉದ್ಯೋಗ ಸ್ಥಳದಲ್ಲಿ ಸ್ವಲ್ಪ ಮಟ್ಟಿಗೆ ಒತ್ತಡ ಕಾಣಿಸಿಕೊಳ್ಳಬಹುದು. ಆರೋಗ್ಯದಲ್ಲೂ ಏರು ಪೇರಾಗುತ್ತದೆ. ಸೋದರರ ಜತೆಗೆ ಉತ್ತಮ ಬಾಂಧವ್ಯ ಇರುತ್ತದೆ. ಸಂತಾನ ನಿರೀಕ್ಷೆಯಲ್ಲಿ ಇರುವ ದಂಪತಿಗೆ ಶುಭ ಸುದ್ದಿ ಕೇಳುವ ಯೋಗವಿದೆ. ಶುಭದಿನ 29. ದೇವಿ ಆರಾಧನೆ, ಸೌಂದರ್ಯಲಹರಿ ಪಠಿಸಿರಿ.




ಹೊಸದಾಗಿ ಮನೆ ಕಟ್ಟಬೇಕು ಎಂದು ಆಲೋಚನೆ ಮಾಡುತ್ತಿರುವವರಿಗೆ ಯೋಜನೆ ಅನುಷ್ಠಾನಕ್ಕೆ ತರಲು ಸೂಕ್ತ ಸಮಯ. ನೌಕರಸ್ಥರಿಗೆ ಮೇಲಧಿಕಾರಿಗಳ ಜತೆಗೆ ಉತ್ತಮ ಸಂಬಂಧ ಇರುತ್ತದೆ. ಪ್ರೀತಿ ಪ್ರೇಮದಲ್ಲಿ ಇರುವವರು ಸಂಗಾತಿ ಜತೆಗೆ ಪ್ರಮುಖವಾದ ವಿಚಾರಗಳನ್ನು ಚರ್ಚೆ ನಡೆಸಲಿದ್ದೀರಿ. ವಾರದ ಅಂತ್ಯಕ್ಕೆ ಸಕಾರಾತ್ಮಕ ಬೆಳವಣಿಗೆಗಳನ್ನು ಕಾಣುತ್ತೀರಿ. ಶುಭದಿನ 26. ಶಿವಪೂಜೆ, ಶಿವಪಂಚಾಕ್ಷರಸ್ತೋತ್ರ ಪಠಿಸಿರಿ.




ಉದ್ಯೋಗಸ್ಥರಿಗೆ ಮೇಲಧಿಕಾರಿಗಳಿಂದ ಪ್ರಶಂಸೆ. ವ್ಯಾಪಾರಸ್ಥರಿಗೆ ಸಮಸ್ಯೆಗಳು ಎದುರಾಗುವ ಸಂಭವ. ತಲೆ ನೋವು ಕಾಣಿಸಿಕೊಳ್ಳುತ್ತದೆ. ವೈವಾಹಿಕ ಜೀವನ ಚೆನ್ನಾಗಿರುತ್ತದೆ. ಸಂಗಾತಿ ಜತೆಗೆ ಸುಮಧುರವಾದ ಕ್ಷಣಗಳನ್ನು ಅನುಭವಿಸಲಿದ್ದೀರಿ. ಭೂಮಿ ಖರೀದಿಗೆ ಒಳ್ಳೆಯ ಸಮಯ. ಮನೆಯಲ್ಲಿ ಶುಭ ಕಾರ್ಯ ನಡೆಯುವ ಸಾಧ್ಯತೆ ಇದೆ. ಶುಭದಿನ 27. ದೇವ್ಯಪರಾಧಕ್ಷಮಾಪಣ ಸ್ತೋತ್ರ ಪಠಿಸಿರಿ.




ಉತ್ತಮ ಹೆಸರು ಮಾಡಲು ಅದ್ಭುತವಾದ ಅವಕಾಶಗಳು ದೊರೆಯುತ್ತವೆ. ನಿಮ್ಮ ಜನಪ್ರಿಯತೆ ಕೂಡ ಹೆಚ್ಚಾಗಲಿದೆ. ವಿದ್ಯಾರ್ಥಿಗಳು ಹೆಚ್ಚು ಶ್ರಮ ವಹಿಸಿ ವ್ಯಾಸಂಗ ಮಾಡಿ, ಅಂದುಕೊಂಡ ಗುರಿಯನ್ನು ತಲುಪಲಿದ್ದೀರಿ. ಕೋರ್ಟ್ ವ್ಯಾಜ್ಯಗಳು ನಡೆಯುತ್ತಿದ್ದಲ್ಲಿ ಅದಕ್ಕಾಗಿ ಹೆಚ್ಚಿನ ಹಣ ಖರ್ಚು ಮಾಡಬೇಕಾಗುತ್ತದೆ. ಆರೋಗ್ಯವು ಉತ್ತಮವಾಗಿರುತ್ತದೆ. ಶುಭದಿನ 30. ಸಂಕಷ್ಟಹರ ಮಹಾಗಣಪತಿ ಪೂಜೆ ಮಾಡಿರಿ.




ಕೌಟುಂಬಿಕ ವಿಚಾರಗಳಲ್ಲಿ ಪ್ರಗತಿಯನ್ನು ಕಾಣಲಿದ್ದೀರಿ. ಮಾರಾಟ ವಿಭಾಗದಲ್ಲಿ ಕೆಲಸ ನಿರ್ವಹಿಸುವವರು ಗುರಿ ಮುಟ್ಟುವಲ್ಲಿ ಸಫಲರಾಗುತ್ತೀರಿ. ಆರೋಗ್ಯ ಉತ್ತಮವಾಗಿ ಇರುತ್ತದೆ. ಬಂಡವಾಳ ಹೂಡಿಕೆಗೆ ಹಲವು ಅವಕಾಶಗಳನ್ನು ಪರಿಶೀಲಿಸಿ, ಅಂತಿಮವಾಗಿ ಅತ್ಯುತ್ತಮವಾದದ್ದನ್ನು ಆರಿಸಿಕೊಳ್ಳುವಲ್ಲಿ ನೀವು ಯಶಸ್ಸು ಪಡೆಯುತ್ತೀರಿ. ಶುಭದಿನ 25. ಶ್ರೀ ಲಕ್ಷ್ಮೀ ನರಸಿಂಹಪಂಚರತ್ನ ಸ್ತೋತ್ರ ಪಠಿಸಿರಿ.




ಶ್ವಾಸಕೋಶ ಸಮಸ್ಯೆ ಹಾಗೂ ರಕ್ತದಲ್ಲಿನ ದೋಷದಿಂದ ಅನಾರೋಗ್ಯ ಉಂಟಾಗುವ ಸಂಭವವಿದೆ. ಮನೆಯಲ್ಲಿ ಶುಭ ಕಾರ್ಯವೊಂದನ್ನು ಆಯೋಜಿಸುವಿರಿ. ಉದ್ಯೋಗಿಗಳಿಗೆ ನೀವು ಪಟ್ಟ ಶ್ರಮಕ್ಕೆ ಮೇಲಧಿಕಾರಿಗಳಿಂದ ಮೆಚ್ಚುಗೆ ದೊರೆಯುತ್ತದೆ. ವ್ಯಾಪಾರ ಆದಾಯದಲ್ಲಿ ಹೆಚ್ಚಳ ಆಗಲಿದೆ. ಇದರಿಂದ ನಿಮಗೆ ಸಂತೋಷ ಸಮಾಧಾನ ಮೂಡಲಿದೆ. ಶುಭದಿನ 28 ಕಾಲಭೈರವನ ಸೇವೆ. ಲಿಂಗಾಷ್ಟಕ ಪಠಿಸಿರಿ.